6. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

ಅ) ಕರ್ನಾಟಕ ಕೊರಗರ (ಅಜಲು ಪದ್ಧತಿ ನಿಷೇಧ) ವಿಧೇಯಕ, 2000

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2000ನೇ ಕರ್ನಾಟಕ ಕೊರಗರ (ಅಜಲು ಪದ್ಧತಿ ನಿಷೇಧ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

''2000ನೇ ಕರ್ನಾಟಕ ಕೊರಗರ (ಅಜಲು ಪದ್ಧತಿ ನಿಷೇಧ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2000ನೇ ಕರ್ನಾಟಕ ಕೊರಗರ (ಅಜಲು ಪದ್ಧತಿ ನಿಷೇಧ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿದೇಯಕವನ್ನು ಮಂಡಿಸಲಾಗಿದೆ. ★

ಆ) ಕರ್ನಾಟಕ ನಿರಸನಗೊಳಿಸುವ ಮತ್ತು ತಿದ್ದುಪಡಿ ಮಾಡುವ ವಿಧೇಯಕ, 2000.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಮಂತ್ರಿಗಳು) (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರ ಪರವಾಗಿ) ಮಾನ್ಯ ಅಧ್ಯಕ್ಷರೆ, 2000ನೇ ಕರ್ನಾಟಕ ನಿರಸನಗೊಳಿಸುವ ಮತ್ತು ತಿದ್ದುಪಡಿ ಮಾಡುವ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

''2000ನೇ ಕರ್ನಾಟಕ ನಿರಸನಗೊಳಿಸುವ ಮತ್ತು ತಿದ್ದುಪಡಿ ಮಾಡುವ

★ ಅನುಬಂಧ (i)